# ಕರ್ನಾಟಕ ರಾಜ್ಯಪತ್ರ

ಅಧಿಕೃತವಾಗಿ ಪ್ರಕಟಿಸಲಾದುದು

## ವಿಶೇಷ ರಾಜ್ಯ ಪತ್ರಿಕೆ

| ಭಾಗ – ೪ಎ<br>Part – IVA | ಬೆಂಗಳೂರು, ಸೋಮವಾರ, ೨೩, ಮಾರ್ಚ್, ೨೦೨೬( ಚೈತ್ರ ,೦೨, ಶಕವರ್ಷ, ೧೯೪೮)<br>BENGALURU, MONDAY, 23, MARCH, 2026( CHAITHRA , 02, SHAKAVARSHA, 1948) | ನಂ. ೨೨೩<br>No. 223 |
|---|---|---|


### ಕರ್ನಾಟಕ ಸರ್ಕಾರ

ಸಂಖ್ಯೆ: RDPR 2 ZPS 2026

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ
ಬೆಂಗಳೂರು, ದಿನಾಂಕ: 23.03.2026.

### ಅಧಿಸೂಚನೆ

ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 350 ಜಿಪಸ 2023, ದಿನಾಂಕ:16.12.2023 ಮತ್ತು ಗ್ರಾಅಪ 55 ತಾಪಸ 2023, ದಿನಾಂಕ:16.12.2023 ರಲ್ಲಿ ವಿಜಯಪುರ ಜಿಲ್ಲೆಯ ಹದಿಮೂರು (13) ತಾಲ್ಲೂಕುಗಳ, ಜಿಲ್ಲಾ ಪಂಚಾಯಿತಿ ಹಾಗೂ ತಾಲ್ಲೂಕು ಪಂಚಾಯಿತಿಗಳ ಚುನಾಯಿತ ಸದಸ್ಯರ ಸಂಖ್ಯೆಯನ್ನು ಹಾಗೂ ಪ್ರಾದೇಶಿಕ ಚುನಾವಣಾ ಕ್ಷೇತ್ರಗಳ ಸೀಮಾ/ಗಡಿಗಳನ್ನು ನಿರ್ಣಯಿಸಿದ ಅಧಿಸೂಚನೆಗಳನ್ನು ಸರ್ಕಾರವು ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಲಾಗಿತ್ತು.

ಸರ್ಕಾರದ ಅಧಿಸೂಚನೆ ಸಂಖ್ಯೆ: RD 16 LRD 2023, ದಿನಾಂಕ:09.10.2024 ಮತ್ತು 20.12.2024 ಹಾಗೂ RD 74 LRD 2024, ದಿನಾಂಕ:04.12.2024 ರಲ್ಲಿ ಕಂದಾಯ ಇಲಾಖೆಯು, ಆಲಮೇಲ ತಾಲ್ಲೂಕಿನಿಂದ ಸಿಂಧಗಿ ತಾಲ್ಲೂಕಿಗೆ ಮತ್ತು ತಾಳಿಕೋಟೆ ತಾಲ್ಲೂಕಿನಿಂದ ಬಸವನ ಬಾಗೇವಾಡಿ ತಾಲ್ಲೂಕಿಗೆ ಕೆಲವು ಗ್ರಾಮಗಳನ್ನು ಸೇರ್ಪಡೆ ಮಾಡಿ ಅಧಿಸೂಚಿಸಿ, ಕರ್ನಾಟಕ ರಾಜ್ಯ ಪತ್ರದಲ್ಲಿ ಪ್ರಕಟಿಸಿರುತ್ತದೆ. ಈ ಹಿನ್ನೆಲೆಯಲ್ಲಿ ಬದಲಾವಣೆಗೊಂಡ ಗ್ರಾಮಗಳನ್ನು ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 350 ಜಿಪಸ 2023, ದಿನಾಂಕ:16.12.2023 ಮತ್ತು ಗ್ರಾಅಪ 55 ತಾಪಸ 2023, ದಿನಾಂಕ:16.12.2023 ರಲ್ಲಿ ಹೊರಡಿಸಿರುವ ಜಿಲ್ಲಾ ಪಂಚಾಯಿತಿ ಹಾಗೂ ತಾಲ್ಲೂಕು ಪಂಚಾಯಿತಿಗಳ ಪ್ರಾದೇಶಿಕ ಚುನಾವಣಾ ಕ್ಷೇತ್ರಗಳ ವ್ಯಾಪ್ತಿಯಿಂದ ಕೈಬಿಡಬೇಕಾಗಿರುತ್ತದೆ.

ಕರ್ನಾಟಕ ಗ್ರಾಮ ಸ್ವರಾಜ್ ಮತ್ತು ಪಂಚಾಯತ್ ರಾಜ್ ಅಧಿನಿಯಮ 1993ರ ಪ್ರಕರಣ 121 ಮತ್ತು ಪ್ರಕರಣ 160 ರನ್ವಯ ಅನುಕ್ರಮವಾಗಿ ತಾಲ್ಲೂಕು ಪಂಚಾಯಿತಿ ಹಾಗೂ ಜಿಲ್ಲಾ ಪಂಚಾಯಿತಿಗಳ ಚುನಾಯಿತ ಸದಸ್ಯರ ಸಂಖ್ಯೆಯನ್ನು ಗ್ರಾಮೀಣ ಜನಸಂಖ್ಯೆಯ ಆಧಾರದ ಮೇಲೆ ಹಾಗೂ ಪ್ರಕರಣ 124 ಮತ್ತು ಪ್ರಕರಣ 163 ರನ್ವಯ ಅನುಕ್ರಮವಾಗಿ ತಾಲ್ಲೂಕು ಪಂಚಾಯತಿ ಹಾಗೂ ಜಿಲ್ಲಾ ಪಂಚಾಯತಿಗಳ ಪ್ರಾದೇಶಿಕ ಚುನಾವಣಾ ಕ್ಷೇತ್ರಗಳನ್ನು ರಚಿಸಬೇಕಾಗಿರುವುದರಿಂದ

R.N.I. No. KARBIL/2001/47147 POSTAL REGN. No. RNP/KA/BGS/2202/2017-19
Licensed to post without prepayment WPP No. 297



ವಿಜಯಪುರ ಜಿಲ್ಲೆಯ ಹದಿಮೂರು (13) ತಾಲ್ಲೂಕುಗಳ ಜಿಲ್ಲಾ ಪಂಚಾಯಿತಿ ಹಾಗೂ ತಾಲ್ಲೂಕು ಪಂಚಾಯಿತಿಗಳ ಪ್ರಾದೇಶಿಕ ಚುನಾವಣಾ ಕ್ಷೇತ್ರಗಳ ಸೀಮಾ / ಗಡಿ ನಿರ್ಣಯದ ಸರ್ಕಾರದ ಅಧಿಸೂಚನೆ ಸಂಖ್ಯೆ: ಗ್ರಾಅಪ 350 ಜಿಪಸ 2023, ದಿನಾಂಕ:16.12.2023 ಮತ್ತು ಗ್ರಾಅಪ 55 ತಾಪಸ 2023, ದಿನಾಂಕ:16.12.2023 ನ್ನು ಈ ಕೂಡಲೇ ಜಾರಿಗೆ ಬರುವಂತೆ ಹಿಂಪಡೆದಿದೆ.

ಕರ್ನಾಟಕ ಪಂಚಾಯತ್ ರಾಜ್ ಸೀಮಾ ನಿರ್ಣಯ ಆಯೋಗವು ಪರಿಷ್ಕೃತ ಸದಸ್ಯರ ಸಂಖ್ಯೆಯನ್ನು ಹಾಗೂ ಸೀಮಾ/ಗಡಿಗಳನ್ನು ನಿಯಮಾನುಸಾರ ರಚಿಸುವುದು.

ಕರ್ನಾಟಕ ರಾಜ್ಯ ಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

**(ಡಾ||ಎನ್. ನೋಮೇಶ್ ಕುಮಾರ್)**
ನಿರ್ದೇಶಕರು (ಪಂ.ರಾಜ್) ಮತ್ತು
ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.

ಮುದ್ರಕರು ಹಾಗೂ ಪ್ರಕಾಶಕರು:– ಸಂಕಲನಾಧಿಕಾರಿಗಳು, ಕರ್ನಾಟಕ ರಾಜ್ಯಪತ್ರ, ಸರ್ಕಾರಿ ಕೇಂದ್ರ ಮುದ್ರಣಾಲಯ, ಬೆಂಗಳೂರು

THAMMAIAH